# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 740 |
| ಉತ್ತರಿಸುವ ದಿನಾಂಕ | 21-02-2024 |
| ಮಾನ್ಯ ಸದಸ್ಯರ ಹೆಸರು | ಶ್ರೀ ಸಿ.ಪಿ.ಯೋಗೇಶ್ವರ್<br>(ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸುವ ಸಚಿವರು | ಕಂದಾಯ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ತುಮಕೂರು ಜಿಲ್ಲೆ ಪಾವಗಡ ತಾಲ್ಲೂಕು, ವಿರುಪಸಮುದ್ರ ಗ್ರಾಮದ ವ್ಯಾಪ್ತಿಯಲ್ಲಿ ಭೂ ಪರಿವರ್ತನೆಯಾಗದ ವ್ಯವಸಾಯ ಭೂಮಿಯನ್ನು ವಾಣಿಜ್ಯ ಉದ್ದೇಶಕ್ಕೆ ಅಕ್ರಮವಾಗಿ ಉಪ ನೋಂದಣಾಧಿಕಾರಿಗಳ ಕಛೇರಿಯಲ್ಲಿ ಲೀಸ್ ಡೀಡ್ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು; | ಸರ್ಕಾರದ ಗಮನಕ್ಕೆ ಬಂದಿದೆ.<br><br>ತುಮಕೂರು ಜಿಲ್ಲೆ ಪಾವಗಡ ತಾಲ್ಲೂಕು, ಕಸಬಾ ಹೋಬಳಿಯ ವಿರುಪಸಮುದ್ರ ಗ್ರಾಮಕ್ಕೆ ಸಂಬಂಧಿಸಿದಂತೆ ಪಾವಗಡ ಉಪ ನೋಂದಣಿ ಕಛೇರಿಯಲ್ಲಿ ದಿನಾಂಕ:25-09-2023 ರಂದು ದಸ್ತಾವೇಜು ಸಂಖ್ಯೆ: 3157/23-24 ರನ್ವಯ ಲೀಸ್ ಡೀಡ್ ಮಾಡಿರುವುದಕ್ಕೆ ಸಂಬಂಧಿಸಿದಂತೆ ಕಾನೂನು ಬಾಹಿರವಾಗಿ ನೋಂದಣಿಯಾಗಿರುವುದು ತುಮಕೂರು ಜಿಲ್ಲಾ ನೋಂದಣಾಧಿಕಾರಿಯವರ ವರದಿಯಿಂದ ಕಂಡು ಬಂದಿದ್ದು, ಪಾವಗಡದ ಪ್ರಭಾರ ಉಪ ನೋಂದಣಾಧಿಕಾರಿ ವಿರುದ್ಧ ನೋಂದಣಿ ಮಹಾಪರಿವೀಕ್ಷಕರು ಹಾಗೂ ಮುದ್ರಾಂಕಗಳ ಆಯುಕ್ತರು ಶಿಸ್ತು ಕ್ರಮ ಪ್ರಾರಂಭಿಸಲು ಕ್ರಮ ವಹಿಸಿರುತ್ತಾರೆ. |
| ಆ | ಸದರಿ ಲೀಸ್ ಡೀಡ್ ವಾಣಿಜ್ಯ ಉದ್ದೇಶಕ್ಕಾಗಿ ಜಿಲ್ಲಾಧಿಕಾರಿಗಳು ಎನ್.ಒ.ಸಿ ಕೊಡದಿರಲು ಕಾರಣವೇನು? (ವಿವರ ಒದಗಿಸುವುದು) | ವಾಣಿಜ್ಯ ಉದ್ದೇಶಕ್ಕಾಗಿ ಎನ್.ಒ.ಸಿ ಕೋರಿ ಸಂಬಂಧಪಟ್ಟವರಿಂದ ಜಿಲ್ಲಾಧಿಕಾರಿಗಳ ಕಛೇರಿಗೆ ಮನವಿ ಸ್ವೀಕೃತವಾಗಿರುವುದಿಲ್ಲ. |

ಕಂಇ/29/ಎಂಎನ್ಎಸ್ಎ/2024

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು